ಕರ್ನಾಟಕ ಸರಕಾರ

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ಸಂಖ್ಯೆ : ಜಾ.ಹ.ನಿ/ಬಕ್ರೀದ್/ಸಿಆರ್/2021-22. ದಿನಾಂಕ : 15.07.2021.

## ಸುತ್ತೋಲೆ

ವಿಷಯ :- ದಿನಾಂಕ : 21-07-2021 ರಂದು ಜಿಲ್ಲೆಯಾದ್ಯಂತ ಬಕ್ರೀದ್ ಹಬ್ಬದ ಆಚರಣೆ ಸಂದರ್ಭದಲ್ಲಿ ಅನಧಿಕೃತವಾಗಿ ಜಾನುವಾರುಗಳ ವಧೆ ಹಾಗೂ ಜಾನುವಾರುಗಳ ಸಾಗಾಣಿಕೆಯನ್ನು ತಡೆಗಟ್ಟುವ ಕುರಿತು.

ಉಲ್ಲೇಖ :- 1. ಸರ್ಕಾರದ ಆದೇಶ ಸಂಖ್ಯೆ : ಪಸಂಮೀ/261/ಸಲೆವಿ/2015.ದಿನಾಂಕ : 14.08.2015.
2. ಆಯುಕ್ತರು, ಪಶುಪಾಲನಾ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ : ಆಪಸಂ/ಅನಿ(ಜಾಗೃತ)/ ವಿವ-31/2015-16. ದಿನಾಂಕ : -/06.2021.
3. ದಿನಾಂಕ : 14.07.2021 ರಂದು ನಡೆದ ಜಿಲ್ಲಾ ಪ್ರಾಣಿ ದಯಾ ಸಂಘದಲ್ಲಿ ಚರ್ಚಿಸಿದಂತೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ಸರ್ಕಾರಿ ಆದೇಶದಲ್ಲಿ ರಾಜ್ಯಾದ್ಯಂತ ಬಕ್ರೀದ್ ಹಬ್ಬದ ದಿನದಂದು ಅಕ್ರಮ ಒಂಟೆ/ಗೋವುಗಳ ಹತ್ಯೆ ತಡೆಗಟ್ಟಲು ಸೂಚಿಸಿರುವುದರಿಂದ ಹಾಗೂ ಈಗಾಗಲೇ ಗೋಹತ್ಯೆ ನಿಷೇಧ ಕಾಯ್ದೆ ಜಾರಿಯಲ್ಲಿರುವುದರಿಂದ ರಾಜ್ಯದಲ್ಲಿ ಎಲ್ಲಾ ದನ/ಕರುಗಳು/ಒಂಟೆಗಳು 13 ವರ್ಷದೊಳಗಿನ ಎಮ್ಮೆ/ಕೋಣಗಳನ್ನು ಅಕ್ರಮ ಸಾಗಾಣಿಕೆ ಹಾಗೂ ವಧೆ ಮಾಡುವುದನ್ನು ನಿಷೇಧಿಸಲಾಗಿದೆ.

ದಿನಾಂಕ : 21-07-2021 ರಂದು ಬಕ್ರೀದ್ ಹಬ್ಬವನ್ನು ಆಚರಿಸುವ ಸಂದರ್ಭದಲ್ಲಿ ಜಿಲ್ಲೆಯಲ್ಲಿ ಅನಧಿಕೃತವಾಗಿ ಎಲ್ಲಾ ದನ/ಕರುಗಳು/ಒಂಟೆಗಳು 13 ವರ್ಷದೊಳಗಿನ ಎಮ್ಮೆ/ಕೋಣಗಳನ್ನು ಅಕ್ರಮ ಸಾಗಾಣಿಕೆ ಹಾಗೂ ವಧೆ ಮಾಡುವ ಸಾಧ್ಯತೆಗಳಿರುತ್ತವೆ. ಉಲ್ಲೇಖ (3)ರ ಜಿಲ್ಲಾ ಪ್ರಾಣಿ ದಯಾ ಸಂಘ ಸಭೆಯಲ್ಲಿ ತೀರ್ಮಾನ ಕೈಗೊಂಡಂತೆ, ಸಂಬಂಧಪಟ್ಟ ಎಲ್ಲಾ ಇಲಾಖೆಯವರು ಬಕ್ರೀದ್ ಹಬ್ಬದ ಆಚರಣೆ ಸಂದರ್ಭದಲ್ಲಿ ಯಾವುದೇ ತರಹದ ಜಾನುವಾರುಗಳನ್ನು ವಧೆ ಮಾಡದಂತೆ ತಡೆಗಟ್ಟುವ ಸಲುವಾಗಿ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಪ್ರಚಾರ ಮಾಡುವುದು ಹಾಗೂ ಪ್ರಮುಖ ರಸ್ತೆಗಳ ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆ ಮಾಡುವುದು, ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿ ಯಾವುದೇ ಜಾನುವಾರುಗಳು ವಧೆಯಾಗದಂತೆ ಕ್ರಮವಹಿಸಲು ಸುತ್ತೋಲೆ ಹೊರಡಿಸಿದೆ.

(ಕವಿತಾ ಎಸ್.ಮನ್ನಿಕೇರಿ)
ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ
ಚಿತ್ರದುರ್ಗ

ಪ್ರತಿಯನ್ನು :-

1) ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ ಇವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2) ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಚಿತ್ರದುರ್ಗ ಇವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3) ಜಿಲ್ಲಾ ಅರಣ್ಯ ಉಪ ಸಂರಕ್ಷಣಾಧಿಕಾರಿಗಳು, ಚಿತ್ರದುರ್ಗ ಇವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3) ಉಪವಿಭಾಗಾಧಿಕಾರಿಗಳು, ಕಂದಾಯ ಇಲಾಖೆ, ಚಿತ್ರದುರ್ಗ ಇವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4) ಉಪನಿರ್ದೇಶಕರು, ಪಶುಪಾಲನಾ & ಪಶು ವೈದ್ಯ ಸೇವಾ ಇಲಾಖೆ, ಚಿತ್ರದುರ್ಗ ಇವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
5) ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಚಿತ್ರದುರ್ಗ ಇವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
6) ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ, ಚಿತ್ರದುರ್ಗ ಇವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
7) ಜಿಲ್ಲಾ ವಾರ್ತಾ ಮತ್ತು ಪ್ರಸಾರಾಧಿಕಾರಿಗಳು, ವಾರ್ತಾ & ಪ್ರಚಾರ ಇಲಾಖೆ, ಚಿತ್ರದುರ್ಗ ಇವರ ಮಾಹಿತಿಗಾಗಿ ಹಾಗೂ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಚಾರ ಮಾಡಲು ಸೂಚಿಸಿದೆ.
8) ಪೌರಾಯುಕ್ತರು, ನಗರ ಸಭೆ, ಚಿತ್ರದುರ್ಗ/ಚಳ್ಳಕೆರೆ/ಹಿರಿಯೂರು ಇವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
9) ತಹಶೀಲ್ದಾರ್, ತಾಲ್ಲೂಕು ಕಛೇರಿ, ಚಿತ್ರದುರ್ಗ, ಚಳ್ಳಕೆರೆ, ಹಿರಿಯೂರು, ಹೊಸದುರ್ಗ, ಹೊಳಲ್ಕೆರೆ, ಮೊಳಕಾಲ್ಮೂರು ಇವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
10) ಕಾರ್ಯನಿರ್ವಹಣಾಧಿಕಾರಿ, ತಾಲ್ಲೂಕು ಪಂಚಾಯತ್, ಚಿತ್ರದುರ್ಗ, ಚಳ್ಳಕೆರೆ, ಹಿರಿಯೂರು, ಹೊಸದುರ್ಗ, ಹೊಳಲ್ಕೆರೆ ಹಾಗೂ ಮೊಳಕಾಲ್ಮೂರು ಇವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ರವಾನಿಸುತ್ತಾ, ತಮ್ಮ ವ್ಯಾಪಿಯ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲು ಸೂಚಿಸಿದೆ.
11) ಮಾಲಿನ್ಯ ನಿಯಂತ್ರಣ ಮಂಡಳಿಯ ಪರಿಸರ ಅಧಿಕಾರಿಗಳು, ಚಿತ್ರದುರ್ಗ ಇವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
12) ಮುಖ್ಯಾಧಿಕಾರಿಗಳು, ಪುರ ಸಭೆ, ಹೊಳಲ್ಕೆರೆ/ಹೊಸದುರ್ಗ ಇವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
13) ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯಿತಿ, ಮೊಳಕಾಲ್ಮೂರು/ನಾಯಕನಹಟ್ಟಿ ಇವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
14) ಸಹಾಯಕ ನಿರ್ದೇಶಕರು, ಪಶು ಆಸ್ಪತ್ರೆ, ಚಿತ್ರದುರ್ಗ, ಚಳ್ಳಕೆರೆ, ಹಿರಿಯೂರು, ಹೊಸದುರ್ಗ, ಹೊಳಲ್ಕೆರೆ, ಮೊಳಕಾಲ್ಮೂರು ಇವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.